ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಪೌರಾಡಳಿತ ಸಂಸ್ಥೆಗಳ ಚುನಾವಣೆ ಮತ್ತು ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಆಯ್ಕೆ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ( ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

179 (245) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಪೌರಾಡಳಿತ ಸಂಸ್ಥೆಗಳ ಚುನಾವಣೆಗಳನ್ನು ಯಾವ ವರ್ಷದಲ್ಲಿ ನಡೆಸಲಾಯಿತು;

(ಆ) ಸದಸ್ಯರ ಚುನಾವಣೆಯಾದ ನಂತರ ಇಲ್ಲಿಯವರೆಗೂ ಸದರಿ ಸಂಸ್ಥೆಗಳಿಗೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಆಯ್ಕೆ ಆಗದಿರುವುದಕ್ಕೆ ಕಾರಣಗಳೇನು;

(ಇ) ಪೌರಾಡಳಿತ ಸಂಸ್ಥೆಗಳ ಚುನಾವಣೆಯಾಗಿದ್ದರೂ, ವರ್ಷಗಟ್ಟಲೆ ಅಧ್ಯಕ್ಷ, ಉಪಾಧ್ಯಕ್ಷರ ನೇಮಕಾತಿಯಾಗದೇ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗಿರುವುದನ್ನು ಸರ್ಕಾರ ಗಮನಿಸಿದೆಯೇ;

(ಈ) ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಆಯ್ಕೆಯ ಪ್ರಕ್ರಿಯೆಯನ್ನು ಯಾವ ಕಾಲಮಿತಿಯೊಳಗೆ ಪೂರ್ತಿ ಮಾಡಲಾಗುವುದು? (ವಿವರ ನೀಡುವುದು)